ಕಛೇರಿ ದೂರವಾಣಿ ಸಂಖ್ಯೆ : 08151 – 299920
Web Site : www.malur.tpa.gov.in
Email : ms.malur.planning.authority@gmail.com

ಕರ್ನಾಟಕ ಸರ್ಕಾರ

# ಮಾಲೂರು ಯೋಜನಾ ಪ್ರಾಧಿಕಾರ, ಮಾಲೂರು

ಮಾರುತಿ ಬಡಾವಣೆ 2ನೇ ಹಂತ, ಮಾಡ್ರನ್ ಶಾಲೆ ಹತ್ತಿರ, ತಿರುಮಲ ಕಲ್ಯಾಣ ಮಂಟಪ ರಸ್ತೆ, ಮಾಲೂರು – 563130, ಕೋಲಾರ ಜಿಲ್ಲೆ.

ದಿನಾಂಕ : 24 DEC 2025

ಸಂಖ್ಯೆ: ಮಾ.ಯೋ.ಪ್ರಾ/89/2025-2026/1505

## ಕಾರ್ಯಾದೇಶ

ವಿಷಯ: ಮಾಲೂರು ತಾಲ್ಲೂಕು, ಲಕ್ಕೂರು ಹೋಬಳಿ ಚಿಕ್ಕತಿರುಪತಿ ಗ್ರಾಮದ ಸರ್ವೆ ನಂಬರ್ 29/2, 31/3, 30/3, 57/1, 57/3, 57/4, 57/5, 58/1, 58/2, 58/3, 58/5, 58/6, 58/7, 58/9, 58/10, 58/11, 58/12, 59/2, 59/4, 59/5, 59/6, 59/7, 60, 61/3, 61/4, 61/6, 62/2, 62/3, 62/4, 62/5, 62/6, 62/7, 62/8, 62/9 ಗಳಲ್ಲಿ ಒಟ್ಟು 26ಎ-4¼ ಗುಂಟೆ ವಿಸ್ತೀರ್ಣದ ಜಮೀನಿನ ವಸತಿ ವಿನ್ಯಾಸ ನಕ್ಷೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ-1961 ರ ಕಲಂ 17(2-ಎ)ರ ಅಡಿಯಲ್ಲಿ ತಾತ್ಕಾಲಿಕ ವಿನ್ಯಾಸ ನಕ್ಷೆ ಅನುಮೋದನೆ ನೀಡುವ ಬಗ್ಗೆ.

ಉಲ್ಲೇಖ:
1. ತಮ್ಮ ಅರ್ಜಿ ದಿನಾಂಕ:-27-10-2025, 25-11-2025 & 24-12-2025
2. ಮಾಲೂರು ಯೋಜನಾ ಪ್ರಾಧಿಕಾರದ 102ನೇ ಸಭೆಯ ಠರಾವು ಸಂಖ್ಯೆ: ದಿನಾಂಕ:29-10-2025
3. ಈ ಕಛೇರಿಯ ಪತ್ರ ಸಂಖ್ಯೆ:ಮಾಯೋಪ್ರಾ/ಖಾ.ವಿ.ನ-89/2024-2025/1245 ದಿನಾಂಕ:21-11-2025
4. ಮಾಲೂರು ಯೋಜನಾ ಪ್ರಾಧಿಕಾರಕ್ಕೆ ಶುಲ್ಕ ಪಾವತಿಸಿದ ರಸೀದಿ ಸಂಖ್ಯೆ:2597 ದಿನಾಂಕ:-24-11-2025

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರ ಅರ್ಜಿಯಲ್ಲಿ ಮಾಲೂರು ತಾಲ್ಲೂಕು, ಲಕ್ಕೂರು ಹೋಬಳಿ ಚಿಕ್ಕತಿರುಪತಿ ಗ್ರಾಮದ ಸರ್ವೆ ನಂಬರ್ 29/2, 31/3, 30/3, 57/1, 57/3, 57/4, 57/5, 58/1, 58/2, 58/3, 58/5, 58/6, 58/7, 58/9, 58/10, 58/11, 58/12, 59/2, 59/4, 59/5, 59/6, 59/7, 60, 61/3, 61/4, 61/6, 62/2, 62/3, 62/4, 62/5, 62/6, 62/7, 62/8, 62/9 ಗಳಲ್ಲಿ ಒಟ್ಟು 26ಎ-4¼ ಗುಂಟೆ ವಿಸ್ತೀರ್ಣದ ಜಮೀನಿಗೆ ತಾತ್ಕಾಲಿಕ ವಸತಿ ಬಡಾವಣೆ ನಕ್ಷೆ ಅನುಮೋದನೆ ನೀಡಲು ಕೋರಿರುತ್ತೀರಿ.

ಪ್ರಸ್ತಾವನೆಯನ್ನು ಉಲ್ಲೇಖ (2) ರಂತೆ ಪ್ರಾಧಿಕಾರದ ಸಭೆಯ ತೀರ್ಮಾನದಂತೆ ವಿವಿಧ ಶುಲ್ಕಗಳನ್ನು ಪಾವತಿಸುವಂತೆ ಉಲ್ಲೇಖಿತ (3) ರ ಪತ್ರದಲ್ಲಿ ತಿಳಿಸಲಾಗಿತ್ತು. ಉಲ್ಲೇಖಿತ (4) ರನ್ವಯ ಅರ್ಜಿದಾರರು ರೂ 3856000/- (ರೂ ಮೂವತ್ತೆಂಟು ಲಕ್ಷದ ಐವತ್ತಾರು ಸಾವಿರ ರೂಪಾಯಿ) ಗಳನ್ನು ಪ್ರಾಧಿಕಾರಕ್ಕೆ ಪಾವತಿಸಿರುತ್ತಾರೆ.

ಈ ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ-1961 ರ ಕಲಂ 17(2-ಎ)ರ ಅಡಿಯಲ್ಲಿ ಮಾಲೂರು ತಾಲ್ಲೂಕು, ಲಕ್ಕೂರು ಹೋಬಳಿ ಚಿಕ್ಕತಿರುಪತಿ ಗ್ರಾಮದ ಸರ್ವೆ ನಂಬರ್ 29/2, 31/3, 30/3, 57/1, 57/3, 57/4, 57/5, 58/1, 58/2, 58/3, 58/5, 58/6, 58/7, 58/9, 58/10, 58/11, 58/12, 59/2, 59/4, 59/5, 59/6, 59/7, 60, 61/3, 61/4, 61/6, 62/2, 62/3, 62/4, 62/5, 62/6, 62/7, 62/8, 62/9 ಗಳಲ್ಲಿ ಒಟ್ಟು 26ಎ-4¼ ಗುಂಟೆ ವಿಸ್ತೀರ್ಣದ ಜಮೀನನ್ನು ಮಟ್ಟ ಮಾಡುವುದು, ನೆಲಗಟ್ಟು ಹಾಸುವುದು, ಜಲ್ಲಿಕಲ್ಲನ್ನು ಹಾಸುವುದು, ಕಲ್ಲುಚಪ್ಪಡಿ ಹಾಕುವುದು, ನಾಲೆಗಳ ನಿರ್ಮಾಣ, ಚರಂಡಿಗಳ ನಿರ್ಮಾಣ, ಮೋರಿಗಳ ನಿರ್ಮಾಣ, ಬೀದಿದೀಪದ ವ್ಯವಸ್ಥೆ ಮತ್ತು ನೀರು ಸರಬರಾಜಿಗೆ ಮಾಡಬೇಕಾದ ವ್ಯವಸ್ಥೆಯನ್ನೊಳಗೊಂಡಂತೆ ನಿವೇಶನಗಳು, ರಸ್ತೆ ಪಂಕ್ತೀಕರಣ, ಉದ್ಯಾನವನ ಮತ್ತು ನಾಗರೀಕ ಸೌಲಭ್ಯ ಪ್ರದೇಶ ಮತ್ತು ಯಾವುದೇ ಇತರೆ ಮೂಲ ಸೌಕರ್ಯವನ್ನು ತೋರಿಸಿ, ಗಡಿ ನಿರ್ಧಾರ ಮತ್ತು ಅಭಿವೃದ್ಧಿ ಉದ್ದೇಶಗಳಿಗಾಗಿ ಮಾತ್ರ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಕೆ.ಟಿ.ಸಿ.ಪಿ ಕಾಯ್ದೆ 1961 ರ ಕಲಂ 17 (2-ಎ) ರಡಿಯಲ್ಲಿ ತಾತ್ಕಾಲಿಕ ವಸತಿ ಬಡಾವಣೆ ನಕ್ಷೆಯನ್ನು ಅನುಮೋದನೆ ನೀಡಲಾಗಿದೆ.

# ಷರತ್ತುಗಳು

1. ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಮಂಜೂರಾತಿಯ ಅವಧಿಯು ಮಂಜೂರಾತಿ ನೀಡಿದ ದಿನದಿಂದ 02 ವರ್ಷಗಳವರೆಗೆ ಮಾತ್ರ ಜಾರಿಯಲ್ಲಿರುತ್ತದೆ. ಈ ಅವಧಿಯಲ್ಲಿ ವಸತಿ ವಿನ್ಯಾಸ ಅಭಿವೃದ್ಧಿಕಾರ್ಯ ಪೂರ್ಣಗೊಳಿಸದಿದ್ದಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮತಿಯನ್ನು ನವೀಕರಿಸಿಕೊಳ್ಳತಕ್ಕದ್ದು.
2. **ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದ ಪತ್ರ ಸಂಖ್ಯೆ:ಕೆ–ರೇರಾ/ಟಿ.ಸಿ.ಪಿ/2024 ದಿನಾಂ:20–02–2024 ರನ್ವಯ ಅಂತಿಮ ಅನುಮೋದನೆಯ ಪೂರ್ವದಲ್ಲಿ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ಕಡ್ಡಾಯವಾಗಿ ನೋಂದಣಿ ಮಾಡಿಸಿ, ನೋಂದಣಿ ಪತ್ರವನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು. ಇಲ್ಲವಾದಲ್ಲಿ ಅಂತಿಮ ಅನುಮೋದನೆ ನೀಡಿ ಶೇ 100 ರಷ್ಟು ನಿವೇಶನಗಳನ್ನು ಬಿಡುಗಡೆಗೊಳಿಸುವುದಿಲ್ಲವೆಂಬ ಷರತ್ತಿಗೊಳಪಟ್ಟಿರುತ್ತದೆ.**
3. ತಾತ್ಕಾಲಿಕ ಅನುಮೋದನೆಯಾಗಿರುವ ವಸತಿ ವಿನ್ಯಾಸ ನಕ್ಷೆಯ ರೀತ್ಯ ಮಾಲೀಕನು ಯಾವುದೇ ಪರಿಹಾರವನ್ನು ಕ್ಲೇಮು ಮಾಡದೆಯೇ ಉಚಿತವಾಗಿ ಸಾರ್ವಜನಿಕ ಉಪಯೋಗದ ರಸ್ತೆಗಳನ್ನು ಮತ್ತು ಉದ್ಯಾನವನ / ಬಯಲು ಜಾಗ ಪ್ರದೇಶಗಳನ್ನು ಸ್ಥಳೀಯ ಸಂಸ್ಥೆಗೆ ಹಾಗೂ ಸಾರ್ವಜನಿಕ ಸೌಲಭ್ಯ ನಿವೇಶನವನ್ನು ಪ್ರಾಧಿಕಾರಕ್ಕೆ ನೋಂದಾಯಿತ ಪರಿತ್ಯಾಜನಾ ಪತ್ರದ ಮುಖಾಂತರ ಹಸ್ತಾಂತರಿಸತಕ್ಕದ್ದು.
4. ಸಂಬಂಧಪಟ್ಟ ಪ್ರಾಧಿಕಾರದ/ಮಂಡಳಿ/ಇಲಾಖೆಯ ಮೇಲ್ವಿಚಾರಣೆಯ ಅಡಿಯಲ್ಲಿ, ಮೇಲೆ ಹೇಳಲಾದ ಎಲ್ಲಾ ಮೂಲ ಸೌಕರ್ಯಗಳನ್ನು ಒಳಗೊಂಡ ಎಲ್ಲಾ ಅಭಿವೃದ್ಧಿ ಕಾಮಗಾರಿಗಳು ಪೂರ್ಣಗೊಂಡಿರುವುದನ್ನು ಖಚಿತಪಡಿಸಿಕೊಳ್ಳಲು ಮತ್ತು ಎಲ್ಲಾ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಿದ್ದಕ್ಕಾಗಿ ಸಂಬಂಧಪಟ್ಟ ಪ್ರಾಧಿಕಾರ/ಮಂಡಳಿ/ ಇಲಾಖೆಯಿಂದ ಕಾರ್ಯಪೂರ್ತಿ ಪ್ರಮಾಣ ಪತ್ರವನ್ನು ಪಡೆದು ಮತ್ತು ಸ್ಥಳೀಯ ಪ್ರಾಧಿಕಾರಕ್ಕೆ ರಸ್ತೆಗಳು, ಉದ್ಯಾನಗಳನ್ನು ಬಿಟ್ಟುಕೊಟ್ಟ ಬಗ್ಗೆ ದಾಖಲೆಗಳನ್ನು ಸಲ್ಲಿಸತಕ್ಕದ್ದು.
5. ಅನುಮೋದಿತ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯ ರೀತ್ಯ ಸಂಪೂರ್ಣವಾಗಿ ಉದ್ಯಾನವನ, ನಾಗರೀಕ ಸೌಲಭ್ಯಕ್ಕೆ ಮೀಸಲಿಟ್ಟ ಜಾಗ, ರಸ್ತೆಗಳು, ಒಳಚರಂಡಿ ವ್ಯವಸ್ಥೆ, ನೀರಿನ ಸೌಕರ್ಯ, ವಿದ್ಯುತ್ ಸಂಪರ್ಕಗಳನ್ನು ಅಭಿವೃದ್ಧಿಪಡಿಸತಕ್ಕದ್ದು.
6. ವಸತಿ ವಿನ್ಯಾಸದ ಗಡಿ ನಿರ್ಧಾರ ಮತ್ತು ಅಭಿವೃದ್ಧಿಪಡಿಸುವ ಉದ್ದೇಶಕ್ಕಾಗಿ ನಕ್ಷೆಯನ್ನು ಬಿಡುಗಡೆ ಮಾಡಲಾಗಿದ್ದು, ವಿನ್ಯಾಸದಲ್ಲಿನ ನಿವೇಶನಗಳನ್ನು ಪರಭಾರೆ ಮಾಡುವುದಾಗಲೀ ಮತ್ತು ಖಾತೆ ತೆರೆಯುವುದಾಗಲೀ ಮಾಡತಕ್ಕದ್ದಲ್ಲ. ನಿವೇಶನಗಳಲ್ಲಿರುವ ಕಟ್ಟಡಗಳಿಗೆ ಪ್ರಾರಂಭ ಪ್ರಮಾಣ ಪತ್ರವನ್ನು ಅಥವಾ ಲೈಸೆನ್ಸನ್ನು ಮಂಜೂರು ಮಾಡತಕ್ಕದ್ದಲ್ಲ ಅಥವಾ ನೀಡತಕ್ಕದ್ದಲ್ಲ.
7. ಪ್ರಶ್ನಿತ ಜಮೀನಿನಲ್ಲಿ ಸರ್ಕಾರಿ ಖರಾಬು ಜಾಗವನ್ನು ಯಥಾವತ್ತಾಗಿ ಕಾಯ್ದಿರಿಸತಕ್ಕದ್ದು ಹಾಗೂ ಈ ಜಾಗವನ್ನು ಒತ್ತುವರಿ ಮಾಡುವುದು ಅಥವಾ ಇತರೆ ಯಾವುದೇ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.
8. ಅರ್ಜಿದಾರರು ಉದ್ದೇಶಿಸಿರುವ ಜಮೀನಿನಲ್ಲಿ ಸರ್ಕಾರದ ಅಥವಾ ಅನ್ಯಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದು ಬಂದಲ್ಲಿ ಅಂತಹ ಸಂದರ್ಭದಲ್ಲಿ ಮಾಲೂರು ಯೋಜನಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ.
9. ಈ ಅನುಮೋದನೆಯನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 17 ರಡಿಯಲ್ಲಿ ನೀಡುತ್ತಿರುವುದರಿಂದ ಇದನ್ನು ಜಮೀನಿನ ಮೇಲಿರುವ ಹಕ್ಕನ್ನು ಅಥವಾ ಮಾಲೀಕತ್ವವನ್ನು ನಿರೂಪಿಸಲು ಉಪಯೋಗಿಸತಕ್ಕದ್ದಲ್ಲ.
10. ಮಾಲೂರು ಯೋಜನಾ ಪ್ರಾಧಿಕಾರವು ಮುಂದೆ ಸೂಚಿಸಬಹುದಾದ ಎಲ್ಲಾ ತಾಂತ್ರಿಕ ವಿಷಯಗಳಿಗೆ ಹಾಗೂ ಶುಲ್ಕಗಳನ್ನು ತುಂಬುವುದರ ನಿರ್ಣಯಕ್ಕೆ ಅರ್ಜಿದಾರರು ಬದ್ಧರಾಗಿರುವುದು.
11. ಸದರಿ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ರಸ್ತೆ, ರಸ್ತೆ ಬದಿಚರಂಡಿ, ಕಲವರ್ಟ್‌ಗಳು, ಪಾದಚಾರಿ ಮಾರ್ಗ ಇತ್ಯಾದಿ ಸಿವಿಲ್ ಕಾಮಗಾರಿಗಳನ್ನು ಸಂಬಂಧಿತ ಲೋಕೋಪಯೋಗಿ ಇಲಾಖೆ/ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ/ನಗರ ಸ್ಥಳೀಯ ಸಂಸ್ಥೆಯ ಉಸ್ತುವಾರಿಯಲ್ಲಿ ಕಾರ್ಯಗತಗೊಳಿಸಿ, ಧೃಢೀಕರಣ ಪತ್ರ ಸಲ್ಲಿಸತಕ್ಕದ್ದು.ಸದರಿ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ ಕಾಮಗಾರಿಗಳನ್ನು ಸಂಬಂಧಿತ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇವರ ಉಸ್ತುವಾರಿಯಲ್ಲಿ ಕಾರ್ಯಗತಗೊಳಿಸಿ ಧೃಢೀಕರಣ ಪತ್ರ ಸಲ್ಲಿಸತಕ್ಕದ್ದು.
12. ಸದರಿ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ವಿದ್ಯುದ್ಧಿಕರಣ ಕಾಮಗಾರಿಗಳನ್ನು ಸಂಬಂಧಿತ ಬೆಸ್ಕಾಂ ಮಂಡಳಿ ಉಸ್ತುವಾರಿಯಲ್ಲಿ ಕಾರ್ಯಗತಗೊಳಿಸಿ ಧೃಢೀಕರಣ ಪತ್ರ ಸಲ್ಲಿಸತಕ್ಕದ್ದು.
13. ಅಭಿವೃದ್ದಿದಾರರು ಕೊಳಚೆ ನೀರನ್ನು ಬಯಲುಜಾಗ/ಖಾಲಿ ಜಾಗಗಳಿಗೆ ಬಿಡದೇ ಸಂಸ್ಕರಿಸಿ ಕುಡಿಯುವ ನೀರಿನ ಹೊರತಾಗಿ ಅನ್ಯ ಉದ್ದೇಶಗಳಿಗೆ ಬಳಕೆ ಮಾಡತಕ್ಕದ್ದು.
14. ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ಕಟ್ಟಡಗಳಲ್ಲಿ ಮಳೆ ನೀರು ಸಂಗ್ರಹಣೆಯನ್ನು ಕಡ್ಡಾಯವಾಗಿ ಅಳವಡಿಸುವುದು ಮತ್ತು ವಿನ್ಯಾಸದಲ್ಲಿ ಅಂತರ್ಜಲ ವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.
15. ವಿನ್ಯಾಸದಲ್ಲಿನ ರಸ್ತೆಗಳಿಂದ ಅಕ್ಕ–ಪಕ್ಕದ ಜಮೀನುಗಳಿಗೆ ಸಂಪರ್ಕವನ್ನು ಯಾವುದೇ ಕಾರಣಕ್ಕೂ ನಿರ್ಬಂಧಿಸತಕ್ಕದ್ದಲ್ಲ.
16. ಸದರಿ ಜಮೀನುಗಳಿಗೆ ಸಂಬಂಧಿಸಿದಂತೆ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಈ ಪ್ರಾಧಿಕಾರವುಜವಾಬ್ದಾರಿಯಾಗಿರುವುದಿಲ್ಲ.
17. ತಾತ್ಕಾಲಿಕ ವಸತಿ ವಿನ್ಯಾಸ ಅನುಮೋದನೆ ಕೋರಿಕೆ ಸಂಬಂಧ ಸಲ್ಲಿಸಲಾಗಿರುವ ದಾಖಲೆ ಅಥವಾ ಬೇರೆ ಯಾವುದೇ ಮಾಹಿತಿಗಳು ತಪ್ಪಾಗಿದ್ದಲ್ಲಿ ವಸತಿ ವಿನ್ಯಾಸಕ್ಕೆ ನೀಡಿರುವ ತಾತ್ಕಾಲಿಕ ಅನುಮೋದನೆ ತಂತಾನೇ ಸ್ವಯಂಚಾಲಿತವಾಗಿ ರದ್ದಾಗುತ್ತದೆ.

18. ಅನುಮೋದನೆಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಲ್ಲಿ ನಿಯಮಾನುಸಾರ ಸೂಕ್ತ ಕ್ರಮ ಜರುಗಿಸಲಾಗುವುದು.
19. ವಿನ್ಯಾಸದಲ್ಲಿ ನಿವೇಶನಗಳ ಮಾರಾಟ ಕುರಿತಂತೆ ನೀಡುವ ಜಾಹೀರಾತಿನಲ್ಲಿ ಯೋಜನಾ ಪ್ರಾಧಿಕಾರದ ಹೆಸರು, ಅನುಮೋದನೆ ಸಂಖ್ಯೆ ಮತ್ತು ವಿವರಗಳನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು.
20. ಆಡಿಟ್ ಸಂದರ್ಭದಲ್ಲಿ ಪಾವತಿಸಿರುವ ಶುಲ್ಕಗಳ ಕುರಿತು ಆಕ್ಷೇಪಣೆಯಾದಲ್ಲಿ ವ್ಯತ್ಯಾಸದ ಮೊತ್ತವನ್ನು ಪಾವತಿಸಲು ಬದ್ಧರಾಗಿರತಕ್ಕದ್ದು.
21. ಭೂಪರಿವರ್ತನೆಯಾದಂತೆ ಸರ್ವೆ ನಂಬರುಗಳ ವಿಸ್ತೀರ್ಣಕ್ಕೆ ಅನುಗುಣವಾಗಿ ಕಂದಾಯ ಇಲಾಖೆಯಿಂದ ಪೋಡಿ / ದುರಸ್ಥಿ ಮಾಡಿಸಿಕೊಳ್ಳತಕ್ಕದ್ದು.
22. ಪ್ರಸ್ತಾವನೆಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಾಗಲಿ / ಲೋಕಾಯುಕ್ತದಲ್ಲಾಗಲೀ / ಎಸಿಬಿಯಲ್ಲಾಗಲಿ ಪ್ರಕರಣ ದಾಖಲಾಗಿದ್ದಲ್ಲಿ ತಾವೇ ಪರಿಹರಿಸಿಕೊಳ್ಳತಕ್ಕದ್ದು.
23. ತಾತ್ಕಾಲಿಕ ವಸತಿ ಬಡಾವಣೆ ನಕ್ಷೆಯಂತೆ ವಿವಿಧ ಅಳತೆಯ 388 ಸಂಖ್ಯೆ ವಸತಿ ನಿವೇಶನಗಳಿದ್ದು, ಮಾಲೂರು ಯೋಜನಾ ಪ್ರಾಧಿಕಾರದ ಪೂರ್ವಾನುಮೋದನೆ ಇಲ್ಲದೇ ನಿವೇಶನಗಳ ಅಳತೆ ಹಾಗೂ ನಿವೇಶನಗಳ ಒಟ್ಟು ಸಂಖ್ಯೆಯನ್ನು ಬದಲಾಯಿಸತಕ್ಕದ್ದಲ್ಲ.
24. ತಾತ್ಕಾಲಿಕ ಅನುಮೋದಿತ ಬಡಾವಣೆ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು, ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಯಾವುದೇ ಬದಲಾವಣೆಗಳನ್ನು ಮಾಡುವಂತಿಲ್ಲ. ಬಡಾವಣೆ ಪೂರ್ಣ ಪ್ರಮಾಣದಲ್ಲಿ ಅಭಿವೃದ್ಧಿಪಡಿಸಿದ ನಂತರ ಅಂತಿಮ ವಸತಿ ಬಡಾವಣೆ ನಕ್ಷೆಯನ್ನು ಪ್ರಾಧಿಕಾರದಿಂದ ಅನುಮೋದನೆ ಪಡೆದು ವಸತಿ ನಿವೇಶನಗಳನ್ನು ಬಿಡುಗಡೆ ಮಾಡಿಸಿಕೊಳ್ಳುವುದು.
25. ಬಡಾವಣೆಯಲ್ಲಿನ ಪ್ರತಿ ನಿವೇಶನಕ್ಕೂ ಕುಡಿಯುವ ನೀರು, ತ್ಯಾಜ್ಯ ನೀರು, ವಿಲೇವಾರಿ ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕಲ್ಪಿಸತಕ್ಕದ್ದು ಹಾಗೂ ಉದ್ದೇಶಿತ ವಸತಿ ವಿನ್ಯಾಸದಲ್ಲಿ ಒಟ್ಟು ಕ್ಷೇತ್ರದಲ್ಲಿ ಬೀಳುವ ಮಳೆನೀರು ವ್ಯರ್ಥವಾಗಿ ಹೋಗದಂತೆ ಉದ್ದೇಶಿತ ಜಮೀನಿನಲ್ಲಿಯೇ ಭೂಮಿಯ ಒಳಗಡೆ ಇಂಗುವಂತೆ ಮಾಡಲು ವಿನ್ಯಾಸವನ್ನು ಸಿದ್ಧಪಡಿಸಿ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿಕೊಳ್ಳತಕ್ಕದ್ದು.
26. ವಸತಿ ಬಡಾವಣೆ ನಕ್ಷೆಯಲ್ಲಿ ತೋರಿಸಿರುವ ರಸ್ತೆ ಅಗಲವನ್ನು ಯಾವುದೇ ಕಾರಣಕ್ಕೂ ಕಡಿಮೆ ಮಾಡಬಾರದು.
27. ಪ್ರಸ್ತಾವನೆಗೆ ಸಂಬಂಧಿಸಿದಂತೆ ಅರ್ಜಿದಾರರು ತಪ್ಪು ದಾಖಲೆ ಅಥವಾ ಇನ್ನಿತರೆ ಪೋರ್ಜರಿ ದಾಖಲಾತಿಗಳನ್ನು ನೀಡಿರುವುದು ರುಜುವಾತಾದಲ್ಲಿ ಕೆಟಿಸಿಪಿ ಕಾಯ್ದೆ 1961 ಕಲಂ 17 ರಡಿಯಲ್ಲಿ ಈಗ ನೀಡಿರುವ ಬಡಾವಣೆ ನಕ್ಷೆ ಅನುಮೋದನೆಯು ಕೆಟಿಸಿಪಿ ಕಾಯ್ದೆ 1961 ಕಲಂ 76 (0)ರನ್ವಯ ತನ್ನಿಂದತಾನೆ ರದ್ದಾಗುವುದೆಂದು ಭಾವಿತಕ್ಕದ್ದು ಹಾಗೂ ಈ ಜಮೀನುಗಳಿಗೆ ಸಿವಿಲ್ ವ್ಯಾಜ್ಯಗಳೇನಾದರು ಇದ್ದಲ್ಲಿ ಪ್ರಾಧಿಕಾರವು ಜವಾಬ್ದಾರರಾಗಿರುವುದಿಲ್ಲ.
28. ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಪ್ರದೇಶವು ಸೇರಿದಂತೆ ಬಡಾವಣೆಯಲ್ಲಿನ 01 ಹೆಕ್ಟೇರ್ ಪ್ರದೇಶದಲ್ಲಿ 40 ಮರಗಳಂತೆ ವಿವಿಧ ಜಾತಿಯ ಗಿಡಮರಗಳನ್ನು ಬೆಳಸಿ ಅಭಿವೃದ್ಧಿಪಡಿಸುವುದು ಹಾಗೂ ಉದ್ಯಾನವನವನ್ನು ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸಿ ಉಪಯೋಗಿಸತಕ್ಕದ್ದು ಬೇರೆ ಯಾವುದೇ ಉದ್ದೇಶಗಳಿಗೆ ಬದಲಾಯಿಸಬಾರದು.
29. ಉದ್ಯಾನವನ ಮತ್ತು ಬಯಲು ಜಾಗಗಳನ್ನು ಅನುಮೋದಿತ ನಕ್ಷೆ ಪ್ರಕಾರ ಶೇ 100 ರಷ್ಟು ನಿವೇಶನಗಳ ಬಿಡುಗಡೆಗೊಳಿಸುವ ಮೊದಲು Chain Link Fencing ಮಾಡಿ ಅಳವಡಿಸುವುದು ಹಾಗೂ ಅಭಿವೃದ್ಧಿಪಡಿಸುವುದು.
**30. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ನಿರಾಕ್ಷೇಪಣಾ ಪತ್ರವನ್ನು ವಿನ್ಯಾಸದಲ್ಲಿನ ಶೇ 40 ರಷ್ಟು ನಿವೇಶನಗಳನ್ನು ಬಿಡುಗಡೆಗೊಳಿಸುವ ಪೂರ್ವದಲ್ಲಿ ಪ್ರಾಧಿಕಾರಕ್ಕೆ ಸಲ್ಲಿಸುವ ಷರತ್ತಿಗೊಳಪಟ್ಟಿರುತ್ತದೆ.**
31. ಬಡಾವಣೆ ನಕ್ಷೆಯಲ್ಲಿ ಪಬ್ಲಿಕ್ ಯುಟಿಲಿಟಿ ಗಳಿಗಾಗಿ ಸೂಕ್ತ ಜಾಗಗಳನ್ನು ಕಾಯ್ದಿರಿಸಿದ್ದು, ಇವುಗಳನ್ನು ಬದಲಾಯಿಸುವಂತಿಲ್ಲ ಹಾಗೂ ಸಂಬಂಧಪಟ್ಟ ಸಂಸ್ಥೆಯ ಅಭಿಪ್ರಾಯದಂತೆ ಅಭಿವೃದ್ಧಿಪಡಿಸುವುದು.
32. ಪ್ರಶ್ನಿತ ಪ್ರದೇಶದಲ್ಲಿ ನೈಸರ್ಗಿಕವಾಗಿ ಅಥವಾ R.S ನಕ್ಷೆಯಂತೆ ಹಾದುಹೋಗುವ ಹಳ್ಳ ಮತ್ತು ಕೊಳ್ಳಗಳನ್ನು ಹಾಗೂ ಬಂಡಿದಾರಿ ಕಾಲುದಾರಿಗಳನ್ನು ಒತ್ತುವರಿ ಮಾಡಬಾರದು. ನೀರಿನ ಹರಿವಿಕೆಗೆ ಅಡಚಣೆ ಉಂಟು ಮಾಡದೇ ಸರಾಗವಾಗಿ ನೀರು ಹರಿದು ಹೋಗುವಂತೆ ಅಭಿವೃದ್ಧಿಪಡಿಸತಕ್ಕದ್ದು.
33. ನೀರು ಸರಬರಾಜು ಮತ್ತು ಕೊಳಚೆ ನೀರು ವ್ಯವಸ್ಥೆಯ ಕೊಳವೆಗಳನ್ನು ಒಟ್ಟಾರೆ ಪ್ರದೇಶದಲ್ಲಿನ ಬೇಡಿಕೆ ಹಾಗೂ ಪೂರೈಕೆಗೆ ಅನುಗುಣವಾಗಿ ವಿನ್ಯಾಸಗೊಳಿಸಿ, ಸೂಕ್ತ ಗಾತ್ರದ ಕೊಳವೆಗಳನ್ನು ಅಳವಡಿಸಲು ಕ್ರಮವಹಿತಕ್ಕದ್ದು.
34. ಪ್ರಾಧಿಕಾರವು ಆಗ್ಗಿಂದಾಗ್ಗೆ ವಿಧಿಸುವ ಇತರೆ ಷರತ್ತುಗಳಿಗೆ ಬದ್ಧರಾಗಿರತಕ್ಕದ್ದು.
35. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ರಚಿಸಿರುವ Direction under section 18(1)(b) of Water (Prevention & Control of Pollution) Act, 1974 ಕಾಯ್ದೆಯಲ್ಲಿ ರೂಪಿಸಿರುವ ನಿಯಮದಂತೆ ಕ್ರಮ ಕೈಗೊಳ್ಳಲು ಸೂಚಿಸಿರುವಂತೆ ಈ ಕೆಳಕಂಡ ಅಂಶಗಳನ್ನು ಕಡ್ಡಾಯವಾಗಿ ಪಾವತಿಸಲು ಸೂಚಿಸಲಾಗಿದೆ.

- ರಾಜಕಾಲುವೆಯನ್ನು ಮುಚ್ಚದಂತೆ ಕ್ರಮವಹಿಸುವುದು.
- ರಾಜಕಾಲುವೆಗಳಿಗೆ ಯಾವುದೇ ಕೊಳಚೆ ನೀರು ಹಾಗೂ ಇನ್ನಿತರೆ ತ್ಯಾಜ್ಯ ವಸ್ತುಗಳು ಸೇರ್ಪಡೆಯಾಗದಂತೆ ಕ್ರಮವಹಿಸುವುದು.

- ಕಂದಾಯ ಇಲಾಖೆಯ ದಾಖಲೆಗಳಂತೆ ಇರುವ ರಾಜಕಾಲುವೆಗಳ ಅಳತೆಗಳನ್ನು ಅತಿಕ್ರಮ/ ಒತ್ತುವರಿ ಆಗದಂತೆ ಯಥಾವತ್ತಾಗಿ ಕಾಯ್ದಿರಿಸಿಕೊಂಡು ಸರಾಗವಾಗಿ ನೀರು ಹರಿಯಲು ಬೇಕಾದ ಕ್ರಮವಹಿಸುವುದು.
- ರಾಜಕಾಲುವೆಗಳು Silt ಆಗದಂತೆ ಹಾಗೂ ತೆರೆದ ಸ್ಥಿತಿಯಲ್ಲಿ ಸ್ವಚ್ಛವಾಗಿರುವಂತೆ ಕ್ರಮವಹಿಸುವುದು.

ಈ ಮೇಲ್ಕಂಡ ಷರತ್ತುಗಳೊಂದಿಗೆ ಮಾಲೂರು ತಾಲ್ಲೂಕು, ಲಕ್ಕೂರು ಹೋಬಳಿ ಚಿಕ್ಕತಿರುಪತಿ ಗ್ರಾಮದ ಸರ್ವೆ ನಂಬರ್ 29/2, 31/3, 30/3, 57/1, 57/3, 57/4, 57/5, 58/1, 58/2, 58/3, 58/5, 58/6, 58/7, 58/9, 58/10, 58/11, 58/12, 59/2, 59/4, 59/5, 59/6, 59/7, 60, 61/3, 61/4, 61/6, 62/2, 62/3, 62/4, 62/5, 62/6, 62/7, 62/8, 62/9 ಗಳಲ್ಲಿ ಒಟ್ಟು 26ಎ-4¼ ಗುಂಟೆ ವಿಸ್ತೀರ್ಣದ ಪ್ರದೇಶಕ್ಕೆ ತಾತ್ಕಾಲಿಕ ವಸತಿ ಬಡಾವಣೆ ನಕ್ಷೆಗೆ ಅನುಮೋದನೆ ನೀಡಲಾಗಿದೆ.

**ಲಗತ್ತು:** ಗಡಿ ನಿರ್ಧಾರ ಮತ್ತು ಅಭಿವೃದ್ಧಿ ಕಾರ್ಯ ಕೈಗೊಳ್ಳಲು ಮಾತ್ರ ನೀಡಲಾಗಿರುವ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ.

ಸಹಿ/-

**ಸದಸ್ಯ-ಕಾರ್ಯದರ್ಶಿ**
ಮಾಲೂರು ಯೋಜನಾ ಪ್ರಾಧಿಕಾರ
ಮಾಲೂರು

ಇವರಿಗೆ,

ಶ್ರೀ.ಸಿದ್ದಾರೆಡ್ಡಿ ಪೆಂಚಲ ನಾರಾಯಣರೆಡ್ಡಿ,
ಗೋಲ್ಡನ್ ಪ್ರಾಪರ್ಟೀಸ್ ಪರವಾಗಿ ಪಾಲುದಾರರಾದ ಎಸ್.ಎಮಾಲಿಕ್,
ಎ.ರಾಮಕೃಷ್ಣರೆಡ್ಡಿ, ಅಬ್ದುಲ್ ಅಜೀಜ್ ಖಾದರ್,
**Mirai Estates LLP represented by its partner sri, Rishi Agarwal**
**Siya Viji Estates Pvt Ltd, Balaram reddy, Rajiv panvar,**
**Shakaar Bla Subramanian, NARAHARI VENTURES & Others**
ಪರವಾಗಿ ಜೆ.ಡಿ.ಎ & ಜಿ.ಪಿ. ಹೋಲ್ಡರ್ ಆದ **ISTUS RESIDENTIAL LAYOUT Pvt Ltd.**
**No.6/A, 2nd Floor, "Kabra Excelsior", 7th Cross,**
**1st Block, Koramangala, Bangalore 565 003,**

ಪ್ರತಿಯನ್ನು,

1. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಚಿಕ್ಕತಿರುಪತಿ ಗ್ರಾಮ ಪಂಚಾಯಿತಿ, ಇವರಿಗೆ ಕಾರ್ಯಾದೇಶ ಮತ್ತು ತಾತ್ಕಾಲಿಕ ವಸತಿ ಬಡಾವಣೆ ನಕ್ಷೆ ಪ್ರತಿಯೊಂದಿಗೆ ಮಾಹಿತಿಗಾಗಿ ಕಳುಹಿಸಿದೆ.
2. ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ, ಕರ್ನಾಟಕ, ಸಿಲ್ವರ್ ಜ್ಯೂಬಿಲಿ ಬ್ಲಾಕ್, 3ನೇ ಕ್ರಾಸ್ ರಸ್ತೆ, ಸಂಪಂಗಿರಾಮನಗರ, ಬೆಂಗಳೂರು-560002 ಇವರಿಗೆ ಕಾರ್ಯಾದೇಶ ಮತ್ತು ತಾತ್ಕಾಲಿಕ ವಸತಿ ಬಡಾವಣೆ ನಕ್ಷೆ ಪ್ರತಿಯೊಂದಿಗೆ ಮಾಹಿತಿಗಾಗಿ ಕಳುಹಿಸಲಾಗಿದೆ.
3. ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್, (ವಿ) ಕಾರ್ಯ ಮತ್ತು ಪಾಲನೆ ಉಪ-ವಿಭಾಗ, ಮಾಲೂರು ಇವರಿಗೆ ಕಾರ್ಯಾದೇಶ ಮತ್ತು ತಾತ್ಕಾಲಿಕ ವಸತಿ ಬಡಾವಣೆ ನಕ್ಷೆ ಪ್ರತಿಯೊಂದಿಗೆ ಮಾಹಿತಿಗಾಗಿ ಕಳುಹಿಸಲಾಗಿದೆ.
4. ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ಮಾಲೂರು ಇವರಿಗೆ ಕಾರ್ಯಾದೇಶ ಮತ್ತು ತಾತ್ಕಾಲಿಕ ವಸತಿ ಬಡಾವಣೆ ನಕ್ಷೆ ಪ್ರತಿಯೊಂದಿಗೆ ಮಾಹಿತಿಗಾಗಿ ಕಳುಹಿಸಲಾಗಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಲಾಖೆ, ಉಪ-ವಿಭಾಗ, ಮಾಲೂರು ಇವರಿಗೆ ಕಾರ್ಯಾದೇಶ ಮತ್ತು ತಾತ್ಕಾಲಿಕ ವಸತಿ ಬಡಾವಣೆ ನಕ್ಷೆ ಪ್ರತಿಯೊಂದಿಗೆ ಮಾಹಿತಿಗಾಗಿ ಕಳುಹಿಸಲಾಗಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಉಪವಿಭಾಗ, ಮಾಲೂರು ಇವರಿಗೆ ಕಾರ್ಯಾದೇಶ ಮತ್ತು ತಾತ್ಕಾಲಿಕ ವಸತಿ ಬಡಾವಣೆ ನಕ್ಷೆ ಪ್ರತಿಯೊಂದಿಗೆ ಮಾಹಿತಿಗಾಗಿ ಕಳುಹಿಸಲಾಗಿದೆ.
7. ಕಛೇರಿ ಪ್ರತಿ.

24/12/2025
ಸದಸ್ಯ ಕಾರ್ಯದರ್ಶಿ
ಸದಸ್ಯ-ಕಾರ್ಯದರ್ಶಿ
ಮಾಲೂರು ಯೋಜನಾ ಪ್ರಾಧಿಕಾರ
ಮಾಲೂರು-563130